# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 400(404)

ಮಾನ್ಯ ಸದಸ್ಯರ ಹೆಸರು: ಡಾ: ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 10.03.2025.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಶಿಕ್ಷಕರ ನೇಮಕಾತಿ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ಹೌದು<br>**ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ:-**<br>1. 2021-22ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8ನೇ ತರಗತಿ) 15000 ಹುದ್ದೆಗಳ ನೇಮಕಾತಿಗಾಗಿ ದಿನಾಂಕ 21.03.2022 ರಂದು ಅಧಿಸೂಚಿಸಲಾಗಿತ್ತು. ಅದರಂತೆ ಈವರೆಗೆ ಒಟ್ಟು 12392 ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ.<br>2. ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024, ದಿನಾಂಕ:07.10.2024 ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 ಹಾಗೂ ಪ್ರೌಢಶಾಲೆಗಳ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.<br>3. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೇನೆನಿ 2024, ದಿನಾಂಕ: 25.11.2024 ರಲ್ಲಿ ದಿನಾಂಕ 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ |

| | | |
|---|---|---|
| | | ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಿರುವುದಿಲ್ಲ.<br>4. ಮುಂದುವರೆದು, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಪ್ರಾಥಮಿಕ ಶಾಲೆಗಳಿಗೆ 35000 ಮತ್ತು ಪ್ರೌಢ ಶಾಲೆಗಳಿಗೆ 9098 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.<br>**ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ:-**<br>1. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಒಟ್ಟು 4639 ಹುದ್ದೆಗಳ ಪೈಕಿ 814 ಹುದ್ದೆಗಳ ಭರ್ತಿಗೆ ಸರ್ಕಾರದ ಅನುಮತಿ ನೀಡಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ.<br>2. ಮುಂದುವರೆದು, 2024-25ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರಾಗಿ ಖಾಲಿ ಇರುವ ಹಾಗೂ ಹುದ್ದೆ ಸೃಜನೆಯಾಗದ ಹುದ್ದೆಗಳಿಗೆ ಎದುರಾಗಿ ಒಟ್ಟು 4689 ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವ ಮೂಲಕ ಹಾಗೂ ಕಾರ್ಯಭಾರ ಕಡಿಮೆ ಇರುವ ಉಪನ್ಯಾಸಕರನ್ನು ಅಗತ್ಯವಿರುವ ಕಡೆಗೆ ನಿಯೋಜಿಸಿ ಉಪನ್ಯಾಸಕರ ಕೊರತೆಯನ್ನು ನೀಗಿಸಲಾಗುತ್ತಿದೆ. |
| ಆ) | ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ವರ್ಷದಲ್ಲಿ ಎಷ್ಟು ಬಾರಿ ನಡೆಸಲಾಗುತ್ತದೆ: | ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ವರ್ಷದಲ್ಲಿ ಒಂದು ಬಾರಿ ನಡೆಸಲಾಗುತ್ತಿದೆ. |
| ಇ) | ಪ್ರಾಥಮಿಕ ಮತ್ತು ಪ್ರೌಢ ಹಾಗೂ | **ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ** |

| | | |
|---|---|---|
| | ಪದವಿ ಪೂರ್ವ ಕಾಲೇಜುಗಳಲ್ಲಿ ಶಾಲೆಗಳಲ್ಲಿ ದೈಹಿಕ ಸಾಂಸ್ಕೃತಿಕ ಶಿಕ್ಷಕರ ನೇಮಕಾತಿ ಮಾಡಲಾಗಿದೆಯೇ: ಇಲ್ಲದಿದ್ದಲ್ಲಿ ಯಾವಾಗ ಮಾಡಲಾಗುವುದು; | **ಸಂಬಂಧಿಸಿದಂತೆ:-**<br>1. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಒಟ್ಟು 656 ವಿಶೇಷ ಶಿಕ್ಷಕರ (ದೈಹಿಕ ಶಿಕ್ಷಕರು, ಸಂಗೀತ ಶಿಕ್ಷಕರು ಮತ್ತು ಚಿತ್ರಕಲಾ ಶಿಕ್ಷಕರು) ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 25.01.2007 ರಂದು ಅಧಿಸೂಚನೆ ಹೊರಡಿಸುವ ಮೂಲಕ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗಿರುತ್ತದೆ.<br>2. ಮುಂದುವರೆದು, ದಿನಾಂಕ: 31.05.2008ರ ವರೆಗೆ ನಿವೃತ್ತಿಯಿಂದ ಲಭ್ಯವಾದ ಪ್ರಾಥಮಿಕ ಶಾಲೆಗಳಲ್ಲಿನ ಒಟ್ಟು 87 ವಿಶೇಷ ಶಿಕ್ಷಕರ ಹುದ್ದೆಗಳನ್ನು ದಿನಾಂಕ: 31.08.2007ರ ವಿಶೇಷ ನೇಮಕಾತಿ ನಿಯಮಗಳನ್ವಯ ಭರ್ತಿ ಮಾಡಿಕೊಳ್ಳಲಾಗಿರುತ್ತದೆ.<br>3. ತದನಂತರ 2024-25ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024, ದಿನಾಂಕ:07.10.2024 ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 380, ಪ್ರೌಢಶಾಲೆಗಳ 216 ದೈಹಿಕ ಶಿಕ್ಷಕರ ಮತ್ತು 48 ವಿಶೇಷ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.<br>**ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ:-**<br>1) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಒಟ್ಟು 20 ದೈಹಿಕ ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು, ಅವುಗಳಲ್ಲಿ 10 ಹುದ್ದೆಗಳನ್ನು ನೇರನೇಮಕಾತಿಗೆ ಹಾಗೂ 10 ಹುದ್ದೆಗಳನ್ನು ಬಡ್ತಿಗಾಗಿ ಮೀಸಲಿರಿಸಲಾಗಿರುತ್ತದೆ.<br>3. 10 ನೇರನೇಮಕಾತಿಗೆ ಸಂಬಂಧಿಸಿದ ದೈಹಿಕ ಶಿಕ್ಷಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ.<br>2) ಮುಂದುವರೆದು, ಬಡ್ತಿಗಾಗಿ ಮೀಸಲಿರಿಸಲಾಗಿರುವ 10 ದೈಹಿಕ ಶಿಕ್ಷಕರ |

| | | |
|---|---|---|
| | | ಹುದ್ದೆಗಳಲ್ಲಿ 05 ಹುದ್ದೆಗಳಿಗೆ ಪದೋನ್ನತಿ ನೀಡಲಾಗಿದ್ದು, ಉಳಿದ 05 ಹುದ್ದೆಗಳಿಗೆ ಪದೋನ್ನತಿ ನೀಡುವ ಪ್ರಕ್ರಿಯೆಯು ಚಾಲನೆಯಲ್ಲಿರುತ್ತದೆ. |

**ಇಪಿ 18 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು